**ಪ್ರಾಸಾ-1**

**3ನೇ ಅಪರ ಮುಖ್ಯ ಮಹಾನಗರ ದಂಡಾಧಿಕಾರಿಗಳ ನ್ಯಾಯಾಲಯ,**
**ಬೆಂಗಳೂರು ನಗರ.**

**ಸಿಸಿ.ನಂ.14709/2010 ಪ್ರಾಸಾ-1**

| | |
|---|---|
| **ಸಾಕ್ಷಿದಾರರ ಹೆಸರು** | ಚಿದಂಬರಂ. |
| **ತಂದೆಯ ಹೆಸರು** | ರಾಮಚಂದ್ರನ್, |
| **ವಯಸ್ಸು** | 66 ವರ್ಷ, |
| **ಉದ್ಯೋಗ** | ಖಾಸಗಿ ಉದ್ಯೋಗಿ, |
| **ವಾಸ** | ಜೆ.ಪಿ.ನಗರ, ಬೆಂಗಳೂರು. |
| **ಪ್ರಮಾಣೀಕರಿಸಿದ ದಿನಾಂಕ** | 02.07.2026. |

**ಕಲಂ.299 ರ ಅಡಿಯಲ್ಲಿ ಮುಖ್ಯ ವಿಚಾರಣೆ : ಹಿ.ಸ ಸ. ಅಭಿಯೋಜಕರವರಿಂದ :**

ನಾನು 1985 ರಿಂದ ಇಲ್ಲಿಯತನಕ ನೀಲ್ ಕಮಲ್ ನಲ್ಲಿ ಮ್ಯಾನೇಜರ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ. ಈ ಪ್ರಕರಣದ ಆರೋಪಿ ನನಗೆ ಗೊತ್ತು. ಆತನು ನನ್ನ ಜೊತೆ ಸೇಲ್ಸ್ ಆಫೀಸರ್ ಆಗಿ ಕೆಲಸ ಮಾಡುತ್ತಿದ್ದನು. 2008 ರಲ್ಲಿ ಆರೋಪಿಯು ಹಣ ಸಂಗ್ರಹ ಮಾಡುವ ವಿಭಾಗದಲ್ಲಿ ರೂ.56ಲಕ್ಷ ಹಣವನ್ನು ಸಂಗ್ರಹ ಮಾಡಿ ತನ್ನ ಸ್ವಂತಕ್ಕೆ ಉಪಯೋಗಿಸಿಕೊಂಡು ಕಂಪನಿಗೆ ನಂಬಿಕೆ ದ್ರೋಹ ಮತ್ತು ಮೋಸ ಉಂಟು ಮಾಡಿರುತ್ತಾನೆ. ಆ ಸಂಬಂಧ ನಾನು ದಿ.08.04.2009 ರಂದು ಮಲ್ಲೇಶ್ವರಂ ಪೊಲೀಸ್ ಠಾಣೆಗೆ ಹೋಗಿ ದೂರನ್ನು ನೀಡಿರುತ್ತೇನೆ. ಸಾಕ್ಷಿಯು ದೂರಿನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದೂರನ್ನು ನಿಪಿ.1 ಎಂದು, ಸಾಕ್ಷಿಯ ಸಹಿಯನ್ನು ನಿಪಿ.1(ಎ) ಎಂದು ಗುರುತಿಸಲಾಯಿತು. ದಿ.09.04.2009 ರಂದು ಪೊಲೀಸರು ಮಹಜರ್ ಕ್ರಮವನ್ನು ಪಂಚರ ಸಮಕ್ಷಮ ಜರುಗಿಸಿರುತ್ತಾರೆ. ಸದರಿ ಮಹಜರ್ ನ್ನು ಬೆಳಿಗ್ಗೆ 09.30 ರಿಂದ 10.30 ಗಂಟೆಯವರೆಗೆ ಜರುಗಿಸಿರುತ್ತಾರೆ. ಸಾಕ್ಷಿಯು ಸದರಿ ಮಹಜರ್ ನಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಮಹಜರ್ ನ್ನು ನಿಪಿ.2 ಎಂದು, ಸಾಕ್ಷಿಯ ಸಹಿಯನ್ನು ನಿಪಿ.2(ಎ) ಎಂದು ಗುರುತಿಸಲಾಯಿತು. ದಿ.11.03.2010 ರಂದು ಯಾವ ಯಾವ ವರ್ಷಗಳಲ್ಲಿ ಎಷ್ಟೆಷ್ಟು ಹಣವೂ ದುರುಪಯೋಗವಾಗಿದೆ ಎಂದು ಮಲ್ಲೇಶ್ವರಂ ಪೊಲೀಸ್ ಠಾಣೆಗೆ ಮರು ದೂರನ್ನು

**ಪ್ರಾಸಾ-1**

ನೀಡಿರುತ್ತೇನೆ. ಸಾಕ್ಷಿಯು ಸದರಿ ಮರು ದೂರಿನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಮರು ದೂರನ್ನು ನಿಪಿ.3 ಎಂದು, ಸಾಕ್ಷಿಯ ಸಹಿಯನ್ನು ನಿಪಿ.3(ಎ) ಎಂದು ಗುರುತಿಸಲಾಯಿತು.

**ಮರು ವಿಚಾರಣೆಃ ಇಲ್ಲ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ.ಹೇ.ಕೇ.ಸ.ಇದೆ**

**3ನೇ ಎ.ಸಿ.ಜೆ.ಎಮ್.ನ್ಯಾ.**
**ಬೆಂಗಳೂರು.**